## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 458 |
| 2 ಸದಸ್ಯರ ಹೆಸರು | : | ಹೆಚ್. ಎಸ್. ಗೋಪಿನಾಥ್, (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 ಉತ್ತರಿಸುವ ದಿನಾಂಕ | : | 15-09-2022 |
| 4 ಉತ್ತರಿಸುವವರು | : | ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಜಿಲ್ಲೆ ಆನೇಕಲ್ ತಾಲ್ಲೂಕಿನ ಬೆಸ್ತಮನಹಳ್ಳಿಯಿಂದ ಅತ್ತಿಬೆಲೆ, ಸರ್ಜಾಪುರ, ವರ್ತೂರು ಮಾರ್ಗವಾಗಿ ರಾಷ್ಟೀಯ ಹೆದ್ದಾರಿ-04, ಹೊಸಕೋಟೆಗೆ ಸೇರುವ ರಸ್ತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಮಹದೇವಪುರ ವಿಧಾನ ಸಭಾ ಕ್ಷೇತ್ರ) ವ್ಯಾಪ್ತಿಯಲ್ಲಿ ಹಾದು ಹೋಗುವ ರಸ್ತೆ ಅಭಿವೃದ್ಧಿಗೊಳಿಸುವ ಹಾಗೂ ಅಗಲೀಕರಣದ ಯೋಜನೆಗಳೇನು; (ವಿವರಗಳನ್ನು ನೀಡುವುದು) | ಆನೇಕಲ್ ತಾಲ್ಲೂಕಿನ ಬೆಸ್ತಮನಹಳ್ಳಿಯಿಂದ ಅತ್ತಿಬೆಲೆ, ಸರ್ಜಾಪುರ, ವರ್ತೂರು ಮಾರ್ಗವಾಗಿ ರಾಷ್ಟ್ರೀಯ ಹೆದ್ದಾರಿ-4, ಹೊಸಕೋಟೆಗೆ ಸೇರುವ ರಸ್ತೆ ನಿರ್ಮಾಣ ಪರಿಧಿಯಲ್ಲಿ ಬರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿ ಪರಿಮಿತಿಯಲ್ಲಿನ ವರ್ತೂರು ಗ್ರಾಮದಿಂದ ಕೊಲಂಬಿಯಾ ಆಸ್ಪತ್ರೆ ತನಕದ ವರ್ತೂರು ಕೆರೆ ಏರಿ ರಸ್ತೆ ಪಕ್ಕದಲ್ಲಿ ಹೊಸ ಸಿ.ಡಿ.ಪಿ ರಸ್ತೆ ನಿರ್ಮಾಣ ಹಾಗೂ ಕೆರೆ ಕೋಡಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ ಕಾಮಗಾರಿಯನ್ನು ಸುಮಾರು ರೂ. 35.00 ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ. ಉಳಿದ ಭಾಗಗಳಲ್ಲಿ ಸದರಿ ರಸ್ತೆಯನ್ನು ಮೆ॥ ಕೆ.ಆರ್.ಡಿ.ಸಿ.ಎಲ್. ಸಂಸ್ಥೆಯು ರಸ್ತೆ ಅಗಲೀಕರಣ ಮತ್ತು ರಸ್ತೆ ನಿರ್ಮಾಣವನ್ನು ಕೈಗೆತ್ತಿಕೊಂಡಿರುತ್ತದೆ. |
| ಆ) | ಸದರಿ ಯೋಜನೆಗಳ ಅನುಷ್ಠಾನ ವಹಿಸಿಕೊಂಡ ಸಂಸ್ಥೆ/ಇಲಾಖೆ/ಏಜೆನ್ಸಿಗಳಾವುದು: (ವಿವರಗಳನ್ನು ನೀಡುವುದು) | ಮಹದೇವಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿ ಪರಿಮಿತಿಯಲ್ಲಿನ ರಸ್ತೆ ಅಭಿವೃದ್ಧಿ ಮತ್ತು ಸೇತುವೆ ನಿರ್ಮಾಣ ಕಾಮಗಾರಿಯನ್ನು ಗುತ್ತಿಗೆದಾರರಾದ ಮೆ॥ ಪಿ.ಜೆ.ಬಿ ಇಂಜಿನಿಯರಿಂಗ್ ಸಂಸ್ಥೆ ರವರಿಂದ ನಿರ್ವಹಿಸಲಾಗುತ್ತಿರುತ್ತದೆ. ಉಳಿದ ಭಾಗಗಳಲ್ಲಿ ಈ ರಸ್ತೆಯನ್ನು ಮೆ॥ ಕೆ.ಆರ್.ಡಿ.ಸಿ.ಎಲ್. ಸಂಸ್ಥೆಯು ರಸ್ತೆ ಅಗಲೀಕರಣ ಮತ್ತು ರಸ್ತೆ ನಿರ್ಮಾಣವನ್ನು ಕೈಗೆತ್ತಿಕೊಂಡಿರುತ್ತದೆ. |
| ಇ) | ಸದರಿ ಯೋಜನೆಗಳ ಅನುಷ್ಠಾನವನ್ನು ಸರ್ಕಾರದ ಮಾರ್ಗಸೂಚಿಗಳನ್ವಯ ಕೈಗೆತ್ತಿಕೊಳ್ಳಲಾಗಿದೆಯೇ? (ಸಂಪೂರ್ಣ ವಿವರ ನೀಡುವುದು) | ಮಹದೇವಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿ ಪರಿಮಿತಿಯಲ್ಲಿನ ರಸ್ತೆ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸುತ್ತಿರುವ ಕಾಮಗಾರಿಯನ್ನು ಸರ್ಕಾರದ ಮಾರ್ಗ ಸೂಚಿಗಳನ್ವಯ ನಿರ್ವಹಿಸಲಾಗುತ್ತಿರುತ್ತದೆ. ಸದರಿ ಯೋಜನೆಯನ್ನು ಕರ್ನಾಟಕ ಸರ್ಕಾರದ ನಗರೋತ್ಥಾನ ಯೋಜನೆಯ ಅನುದಾನದಲ್ಲಿ ತೆಗೆದುಕೊಳ್ಳಲಾಗಿರುತ್ತದೆ. |

**ಸಂಖ್ಯೆ: ನಅಇ 728 ಎಂಎನ್‌ವೈ 2022 (ಇ)**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ